# <u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ..... ಚಿತ್ತಾಪೂರ</u>

C.C No.79/2019
CW-1 PW-1

ಹೆಸರು : ಮಹೆಬೂಬ ಸಗರ

ತಂದೆ ಹೆಸರು : ಹಮೀದ ಮಿಯ್ಯಾ

ವಯಸ್ಸು : ೪೫ ವರ್ಷ

ಉದ್ಯೋಗ : ಒಕ್ಕಲುತನ

ವಾಸ ಸ್ಥಳ : ತರಕಾಸಪೇಟ್, ತಾ: ಚಿತ್ತಾಪೂರ, ಜಿ: ಕಲಬುರಗಿ.

---

**<u>ಪ್ರಮಾಣವಚನ ಭೋಧಿಲಾಯಿತು. ದಿಃ 18.06.2024</u>**

**<u>ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರಿಂದ</u>**

ಚಾಸಾ-೨ ನನ್ನ ಅಣ್ಣ. ಚಾಸಾ-೩ ರಿಂದ ಚಾಸಾ-೬ರವರ ಪರಿಚಯ ನನಗೆ ಇರುತ್ತದೆ. ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನಾನು ಯಾವತ್ತು ನೋಡಿರುವುದಿಲ್ಲ. ಪೊಲೀಸರು ಯಾವತ್ತು ನನಗೆ ನ್ಯಾಯಾಲಯದ ಮುಂದಿರುವ ಆರೋಪಿಯನ್ನು ತೋರಿಸಿರುವುದಿಲ್ಲ ಮತ್ತು ಯಾವುದೇ ಹೇಳಿಕೆಯನ್ನು ಪಡೆದುಕೊಂಡಿರುವುದಿಲ್ಲ.

ಸುಮಾರು ೬ ವರ್ಷಗಳ ಹಿಂದೆ ನಾನು ಮೃತ ಸಿದ್ದಪ್ಪ ಹಾಗೂ ಚಾಸಾ-೩ ರವರು ಕೂಡಿ ಮೋಟಾರಸೈಕಲ್ ನಲ್ಲಿ ಹೋಗುತ್ತಿದ್ದಾಗ ಕೊಲ್ಲೂರ ರಸ್ತೆಯಲ್ಲಿ ಒಂದು ಟಿಪ್ಪರ ವಾಹನ ಬಂದು ನಮ್ಮ ಮೋಟಾರ ಸೈಕಲಗೆ ಡಿಕ್ಕಿಪಡಿಸಿತ್ತು. ಸದರಿ ಅಪಘಾತದ ಪರಿಣಾಮ ನನಗೆ ಮತ್ತು ಚಾಸಾ-೩ ರವರಿಗೆ ಸಾದಾ ಮತ್ತು ಭಾರಿ ಸ್ವರೂಪದ ರಕ್ತಗಾಯಗಳು ಆಗಿದ್ದವು. ಅಪಘಾತದಲ್ಲಿ ಸಿದ್ದಪ್ಪ ಈತನು ಸ್ಥಳದಲ್ಲಿಯೇ ಮೃತಪಟ್ಟಿರುತ್ತಾನೆ.

ನಾನು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವಾಗ, ಪೊಲೀಸರು ಒಂದು ದಾಖಲೆಗೆ ನನ್ನ ಹೆಬ್ಬೆಟ್ಟಿನ ಗುರುತನ್ನು ಪಡೆದಿರುತ್ತಾರೆ. ಸಾಕ್ಷಿಯು ಹೇಳಿಕೆಯಲ್ಲಿರುವ ತನ್ನ ಹೆಬ್ಬೆಟ್ಟಿನ ಗುರುತನ್ನು

ನೋಡಿ ಗುರುತಿಸಿದ್ದು, ಅದನ್ನು ನಿಶಾನೆ ಪಿ-೧ ಎಂದು ಗುರುತಿಸಲಾಯಿತು.

(ಮಾನ್ಯ ಸ ಸ ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ದಾಖಲೆಗಳನ್ನು ಪರಿಶೀಲಿಸಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಸ.ಸ.ಅಭಿಯೋಜಕರವರಿಂದ</u>**

ದಿನಾಂಕ: ೨೪.೦೯.೨೦೧೮ರಂದು ಸಾಯಂಕಾಲ ೬.೩೦ರ ಸುಮಾರಿಗೆ ನ್ಯಾಯಾಲಯದ ಮುಂದಿರುವ ಆರೋಪಿ ತನ್ನ ಟಿಪ್ಪರ ಸಂಖ್ಯೆ: ಕೆಎ-೩೩/ಎ-೮೬೧೪ನ್ನು ಅತಿ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಎದುರುಗಡೆಯಿಂದ ಬರುತ್ತಿದ್ದು ಟಿವಿಎಸ್ ಮೋಟಾರ ಸೈಕಲ್ ಸಂಖ್ಯೆ: ಕೆಎ -32/ಇಪಿ-4417 ಕ್ಕೆ ಡಿಕ್ಕಿಪಡಿಸಿದ್ದರ ಪರಿಣಾಮ ಮೋಟಾರ ಸೈಕಲ ಸವಾರ ಸಿದ್ದಪ್ಪ ಈತನು ಗಂಭೀರ ಸ್ವರೂಪದ ರಕ್ತಗಾಯಗಳಾಗಿ ಸ್ಥಳದಲ್ಲಿಯೇ ಮೃತಪಟ್ಟಿರುತ್ತಾನೆ ಎಂದರೆ ಸರಿಯಲ್ಲ. ಸದರಿ ಅಪಘಾತದಲ್ಲಿ ನನಗೆ ಮತ್ತು ಚಾಸಾ-೩ ರವರಿಗೆ ಸಾಮಾನ್ಯ ಮತ್ತು ತೀವ್ರ ಸ್ವರೂಪದ ರಕ್ತಗಾಯಗಳು ಆಗಿದ್ದವು ಎಂದರೆ ಸರಿಯಲ್ಲ. ಅಪಘಾತ ಮಾಡಿದ ನಂತರ, ನ್ಯಾಯಾಲಯದ ಮುಂದಿರುವ ಆರೋಪಿ, ವಾಹನದ ಸಮೇತ ಓಡಿ ಹೋಗಿರುತ್ತಾನೆ ಎಂದರೆ ಸರಿಯಲ್ಲ.

ನಾನು ೦೬-೦೧-೨೦೧೯ರಂದು ಪೊಲೀಸರಿಗೆ ಪುರವಣಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಪುರವಣೆ ಹೇಳಿಕೆಯನ್ನು ನಿಶಾನೆ ಪಿ-೨ ಎಂದು ಗುರುತಿಸಲಾಯಿತು. ನಿಶಾನೆ ಪಿ-೧ ಮತ್ತು ೨ ರಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುತ್ತವೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿಯ ಪರ ಶ್ರೀ ಹೆಚ್.ಎನ್.ಎಸ್. ವಕೀಲರಿಂದ - ಏನು ಇಲ್ಲಾ</u>**

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು )

ಓ. ಹೇ ಕೇ.ಸರಿ ಇದೆ.

ಸಿವಿಲ್ & J.M.F.C ನ್ಯಾಯಾಧೀಶರು,

ಚಿತ್ತಾಪೂರ.